**1ನೇ ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ., ರವರ ನ್ಯಾಯಾಲಯ, ನಂಜನಗೂಡು**

**ಸಿ.ಸಿಃ 1145/2015**

| | | | |
|---|---|---|---|
| ಸಾಕ್ಷಿದಾರರ ಹೆಸರು | | ಶಿವಣ್ಣ ಬಿ.ವೈ | ಪ್ರಾಸಾಃ 10 |
| ತಂದೆಯ ಹೆಸರು | | ಬೋಗೇಗೌಡ | ಚಾಸಾಃ 10 |
| ವಯಸ್ಸು | | 57 ವರ್ಷ | |
| ಕೆಲಸ | | ಪಿ.ಎಸ್.ಐ, ನಂಜನಗೂಡು ನಗರ ಪೊಲೀಸ್ ಠಾಣೆ | ಸಾ ಪ್ರ ಬೋ |
| ವಾಸ | | ನಂಜನಗೂಡು | ದಿಃ 16.07.2024 |

**ಮುಖ್ಯ ವಿಚಾರಣೆ ಎ.ಪಿ.ಪಿ.ಯವರಿಂದಃ**

ನಾನು ಬದನವಾಳು ಪೋಲಿಸ್ ಠಾಣೆಯಲ್ಲಿ ಸೆಪ್ಟೆಂಬರ್, 2013 ರಿಂದ ಡಿಸೆಂಬರ್, 2016 ರವರೆಗೂ ಮುಖ್ಯ ಪೇದೆ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿನಾಂಕ 27.06.2014 ರಂದು ನಾನು ಠಾಣಾ ಪ್ರಭಾರದಲ್ಲಿ ಇದ್ದಾಗ ಸಂಜೆ 7 ಗಂಟೆಗೆ ಚಾಸಾ-1 ರವರು ಕಂಪ್ಯೂಟರಿಕೃತ ಲಿಖಿತ ದೂರನ್ನು ಚಾಸಾ 4 ರವರ ಮುಖೇನ ಕಳುಹಿಸಿಕೊಟ್ಟಿದ್ದು, ಅದನ್ನು ಸ್ವೀಕರಿಸಿ ಠಾಣೆ ಮೊ.ಕ ಸಂಖ್ಯೆ 145/2014 ರಂತೆ ಕಲಂ 143, 341, 353, 114 ಸಹವಾಚಕ ಕಲಂ 149 ಐ.ಪಿ.ಸಿ ರೀತ್ಯ ಪ್ರಕರಣವನ್ನು ದಾಖಲಿಸಿ ಪ್ರ.ವ.ವ ವರದಿಯನ್ನು ನ್ಯಾಯಾಲಯಕ್ಕೆ ಮತ್ತು ಮೇಲಾಧಿಕಾರಿಗಳಿಗೆ ನಿವೇದಿಸಿಕೊಂಡಿರುತ್ತೇನೆ.

ಮುಂದಿನ ತನಿಖೆಗಾಗಿ ಪ್ರಕರಣದ ಕಡತವನ್ನು ಚಾಸಾ-11 ರವರಿಗೆ ಹಸ್ತಾಂತರಿಸಿರುತ್ತೇನೆ.

ಈಗ ನನಗೆ ತೋರಿಸಿದ ದಾಖಲೆಯು ನಾನು ಸ್ವೀಕರಿಸಿದ ಲಿಖಿತ ದೂರಾಗಿದ್ದು, ಅದರಲ್ಲಿ ನನ್ನ ರುಜು ಇರುತ್ತದೆ. ದೂರನ್ನು ಈಗಾಗಲೇ ನಿಪಿ-2 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ರುಜುವನ್ನು ನಿಪಿ-2(ಬಿ) ಎಂದು ಗುರುತಿಸಲಾಯಿತು.

ಪ್ರಥಮ ವರ್ತಮಾನ ವರದಿಯನ್ನು ಸಾಕ್ಷಿ ನೋಡಿ ಗುರುತಿಸಿದ್ದು ಅದನ್ನು ನಿಪಿ-೨ ಎಂದು ಮತ್ತು ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ-೨(ಎ) ಎಂದು ಗುರುತಿಸಲಾಯಿತು.

**<u>ಪಾಟೀ ಸವಾಲುಃ ಆರೋಪಿ ಪರ ಶ್ರೀ ಆರ್.ಎಂ.ಎಸ್ ವಕೀಲರಿಂದಃ</u>**

ಆರೋಪಿತರ ವಿರುದ್ದ ಚಾಸಾ 1 ರವರ ಪ್ರಭಾವಕ್ಕೆ ಒಳಗಾಗಿ ಸುಳ್ಳು ಪ್ರಕರಣ ದಾಖಲಿಸಿದ್ದೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆ ಇಲ್ಲ.

ನನ್ನ ಉಕ್ತಲೇಖನದ ಮೇರೆಗೆ ತೆರದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.

**ಓ ಹೇ ಕೇ ಸ ಇದೆ ಎಂ ಓ**

ಸಹಿ/-

**1ನೇ ಹೆಚ್ಚುವರಿ ಸಿ.ಜೆ ಮತ್ತು ಪ್ರದನ್ಯಾದಂ**

**ನಂಜನಗೂಡು**